# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1622

ಸದಸ್ಯರ ಹೆಸರು : ಶ್ರೀ. ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.

ಉತ್ತರಿಸುವ ದಿನಾಂಕ : 11.03.2022.

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| 1. | ಕರಾವಳಿ ಮತ್ತು ಮಲೆನಾಡು ಪ್ರದೇಶಗಳಲ್ಲಿ ಅಡಿಕೆ ಎಲೆ ಹಳದಿ ರೋಗ ಹಾವಳಿಯಿಂದ ರೈತರಿಗೆ ನಷ್ಟ ಸಂಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; | ಸರ್ಕಾರದ ಗಮನದಲ್ಲಿದೆ.<br><br>ರೋಗದ ನಿಯಂತ್ರಣಕ್ಕೆ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ.<br>1.ಅಡಿಕೆ ಹಳದಿ ಎಲೆ ರೋಗದ ನಿಯಂತ್ರಣಕ್ಕೆ ತಾಂತ್ರಿಕ ಮಾರ್ಗಸೂಚಿಯನ್ನು ಜಾರಿಗೊಳಿಸಿ ಕೆಳಗಿನ ಮಾಹಿತಿ ಬಗ್ಗೆ ರೈತರಿಗೆ ತಿಳುವಳಿಕೆ ನೀಡಲಾಗಿದೆ.<br>• ಅಡಿಕೆ ಬೆಳೆಗೆ ತಗಲುವ ವಿವಿಧ ರೋಗ ಮತ್ತು ಕೀಟಗಳ ನಿಯಂತ್ರಣ ಕ್ರಮಗಳ ಬಗ್ಗೆ ರೈತರಲ್ಲಿ ಜಾಗೃತಿ.<br>• ಸರಿಯಾದ ಮಣ್ಣಿನ ಮತ್ತು ಪೋಷಕಾಂಶಗಳ ನಿರ್ವಹಣೆಯಿಂದ ರೋಗವನ್ನು ತಡೆಗಟ್ಟುವುದು.<br>• ರೋಗ ಬಾಧಿತ ಪ್ರದೇಶಗಳಲ್ಲಿ ಬಹುಬೆಳೆ ಪದ್ಧತಿಯನ್ನು ಅನುಸರಿಸಲು ಹೆಚ್ಚಿನ ಒತ್ತು ನೀಡುವುದು.<br>• ಅಡಿಕೆ ಬೆಳೆಗೆ ಅವಶ್ಯವಿರುವ ಸಾವಯವ ಗೊಬ್ಬರ, ರಾಸಾಯನಿಕ ಗೊಬ್ಬರ, ಸೂಕ್ಷ್ಮ ಪೋಷಕಾಂಶಗಳು ಹಾಗೂ ಸುಣ್ಣ, ಹಾಗೂ ಸಸ್ಯ ಸಂರಕ್ಷಣಾ ಔಷಧಿಗಳನ್ನು ಬಳಸುವುದು.<br>• ಅಡಿಕೆ ಹಳದಿ ಎಲೆ ರೋಗ ಬಾಧಿತ ತೋಟಗಳಲ್ಲಿ ಉತ್ತಮ ನೀರು ಮತ್ತು ಪೋಷಕಾಂಶ ನಿರ್ವಹಣೆಗಾಗಿ ಪ್ಲಾಸ್ಟಿಕ್ ಹೊದಿಕೆಯನ್ನು ಅಳವಡಿಸುವುದು.<br>• ಅಡಿಕೆ ತೋಟಗಳ ನಿರ್ವಹಣೆಯಲ್ಲಿ ಜೈವಿಕ ನಿಯಂತ್ರಕಗಳ ಉಪಚರಣೆ (Trichoderma harzianum, Bacillus megaterium, Pseudomonas fluorescens), ನೀರು ಮತ್ತು ಪೋಷಕಾಂಶಗಳ ನಿರ್ವಹಣೆ (Drip Irrigation with Fertigation + Organic manures) ಹಾಗೂ |

| | | |
|---|---|---|
| | | • ಅಗತ್ಯಕ್ಕನುಗುಣವಾದ ಲಘು ಪೋಷಕಾಂಶಗಳ ನಿರ್ವಹಣೆ ಕೈಗೊಳ್ಳುವುದು.<br>• ಅಡಿಕೆ ಹಳದಿ ಎಲೆ ರೋಗಬಾಧೆ ತೀವ್ರವಾಗಿರುವ ತೋಟಗಳಲ್ಲಿ ಅಂತಹ ಮರಗಳನ್ನು ತೆಗೆದು ಪರ್ಯಾಯ ಬೆಳೆಗಳಾದ ಬಾಳೆ, ತೆಂಗು, ಕಾಫಿ, ಕೋಕೋ, ಕಾಳುಮೆಣಸು, ಜಾಯಿಕಾಯಿ, ಬೆಣ್ಣೆಹಣ್ಣು, ರಾಂಬೂಟಾನ್, ಲಿಚ್ಚಿಹಣ್ಣು, ದಾಲ್ಚಿನ್ನಿ, ಲವಂಗ, ತಾಳೆಬೆಳೆ ಹಾಗೂ ಇತರೆ ಬೆಳೆಗಳನ್ನು ಬೆಳೆಯುವುದು.<br><br>2.ರಾಜ್ಯವಲಯ ಯೋಜನೆಯಾದ ತೋಟಗಾರಿಕೆ ಬೆಳೆಗಳ ಕೀಟ ಮತ್ತು ರೋಗಗಳ ಸಮಗ್ರ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಅಡಿಕೆ ಬೆಳೆಗೆ ಸೇರಿದಂತೆ ಸಸ್ಯ ಸಂರಕ್ಷಣೆ ಔಷಧಿ ಖರೀದಿಗೆ ಸಾಮಾನ್ಯ ವರ್ಗದವರಿಗೆ ಶೇ.75ರಷ್ಟು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವರ್ಗದವರಿಗೆ ಶೇ.90ರಷ್ಟು ಸಹಾಯಧನವನ್ನು ನೀಡಲಾಗುತ್ತಿದೆ.<br><br>3.ಕೇಂದ್ರವಲಯ ಯೋಜನೆಯಾದ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಅಡಿಯಲ್ಲಿ ಸಮಗ್ರ ಕೀಟ ಮತ್ತು ರೋಗಗಳ ನಿಯಂತ್ರಣ ಕೈಗೊಳ್ಳಲು ರೈತರಿಗೆ ಶೇ.30ರಷ್ಟು ಸಹಾಯಧನ ನೀಡಲಾಗುತ್ತಿದೆ. |
| 2. | ಬೆಳೆ ಪರಿಹಾರಕ್ಕೆ ಈಗಾಗಲೇ ರಾಜ್ಯ ಸರ್ಕಾರವು ಬಿಡುಗಡೆಗೊಳಿಸಿದ "ಪ್ಯಾಕೇಜ್" ಅನ್ನು ಬೇರೆಯಾವುದೇ ಉದ್ದೇಶಕ್ಕೆ ಬಳಸದಂತೆ ಕ್ರಮವಹಿಸಲಾಗಿದೆಯೇ? | 2021-22 ನೇ ಸಾಲಿನ ಆಯವ್ಯಯ ಭಾಷಣದ 59ನೇ ಕಂಡಿಕೆಯನ್ವಯ ಅಡಿಕೆ ಬೆಳೆಗಾರರನ್ನು ತೀವ್ರವಾಗಿ ಬಾಧಿಸುತ್ತಿರುವ ಹಳದಿ ಎಲೆ ರೋಗದ ಕುರಿತ ಸಂಶೋಧನೆ ತೀವ್ರಗೊಳಿಸಲು ಹಾಗೂ ಪರ್ಯಾಯ ಬೆಳೆಯನ್ನು ಪ್ರೋತ್ಸಾಹಿಸಲು ರೂ.25.00 ಕೋಟಿಗಳ ಕಾರ್ಯಕ್ರಮವನ್ನು ಘೋಷಿಸಿದ್ದು, ಈ ಅನ್ವಯ 3 ವರ್ಷಗಳ ಅವಧಿಗೆ ಕಾರ್ಯಕ್ರಮ ರೂಪಿಸಲಾಗಿದೆ. ಈ ಅನುದಾನವನ್ನು ಇದೇ ಉದ್ದೇಶಕ್ಕೆ ಬಳಸಲಾಗುವುದು. ಬೆಳೆ ಪರಿಹಾರಕ್ಕೆ ಅನುದಾನ ಬಿಡುಗಡೆಗೊಳಿಸಿರುವುದಿಲ್ಲ. |

HORTI 144 HGM 2022

(ಮುನಿರತ್ನ)
ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ
ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು